# ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

ವಿಶೇಷ ರಾಜ್ಯ ಪತ್ರಿಕೆ

| ಭಾಗ – ೪ಎ<br>Part – IVA | ಬೆಂಗಳೂರು, ಬುಧವಾರ, ೧೦ ಸೆಪ್ಟೆಂಬರ್, ೨೦೨೫ (ಭಾದ್ರಪದ ೧೯, ಶಕವರ್ಷ ೧೯೪೭)<br>BENGALURU, WEDNESDAY, 10 SEPTEMBER, 2025 (BHADRAPADA 19, SHAKAVARSHA 1947) | ನಂ. ೫೬೭<br>No.567 |
|---|---|---|


## PARLIAMENTARY AFFAIRS AND LEGISLATION SECRETARIAT

## NOTIFICATION

## NO: DPAL 48 SHASANA 2025, BENGALURU, DATED:10.09.2025

the Karnataka Fire Force (Amendment) Bill, 2025 ಇದಕ್ಕೆ 2025ರ ಸೆಪ್ಟೆಂಬರ್ ತಿಂಗಳ 10ನೇ ದಿನಾಂಕದಂದು ರಾಜ್ಯಪಾಲರ ಒಪ್ಪಿಗೆ ದೊರೆತಿದ್ದು, ಸಾಮಾನ್ಯ ತಿಳುವಳಿಕೆಗಾಗಿ ಇದನ್ನು 2025ರ ಕರ್ನಾಟಕ ಅಧಿನಿಯಮ ಸಂಖ್ಯೆ:59 ಎಂಬುದಾಗಿ ಕರ್ನಾಟಕ ರಾಜ್ಯಪತ್ರದಲ್ಲಿ (ಭಾಗ IV-A) ಪ್ರಕಟಿಸಬೇಕೆಂದು ಆದೇಶಿಸಲಾಗಿದೆ,-

## KARNATAKA ACT NO. 59 OF 2025

(First Published in the Karnataka Gazette Extra-ordinary on the 10th day of September, 2025)

## THE KARNATAKA FIRE FORCE (AMENDMENT) ACT, 2025

(Received the assent of the Governor on the 10th day of September, 2025)

An Act further to amend the Karnataka Fire Force Act, 1964.

Whereas it is expedient further to amend the Karnataka Fire Force Act, 1964 (Karnataka Act 42 of 1964), for the purposes hereinafter appearing;

Be it enacted by the Karnataka State Legislature in the Seventy sixth year of the Republic of India as follows:-

**1. Short title and commencement.-** (1) This Act may be called the Karnataka Fire Force (Amendment) Act, 2025.

(2) It shall come into force on such date as the State Government may, by notification in the Official Gazette, appoint.

**2. Amendment of section 15.-** In section 15 of the Karnataka Fire Force Act, 1964 (Karnataka Act 42 of 1964), after sub-section (2), the following provisos shall be inserted, namely:-

"Provided that, the fire cess shall be levied in the form of a surcharge at the rate of one percent on the property tax of newly constructed multi-storied buildings (high rise building) as defined in section 13 of the Act, with effect from the date of commencement of the Karnataka Fire Force (Amendment) Act, 2025.

Provided further that, no fire cess shall be levied on any building vested in or under the control or possession of the State Government or the Central Government or any public authority owned by the State Government or the Central Government."

By Order and in the name of
the Governor of Karnataka,

**G.SRIDHAR**
Secretary to Government
Department of Parliamentary
Affairs and Legislation

**ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಸಚಿವಾಲಯ**
**ಅಧಿಸೂಚನೆ**
**ಸಂಖ್ಯೆ: ಸಂವ್ಯಶಾಇ 48 ಶಾಸನ 2025, ಬೆಂಗಳೂರು, ದಿನಾಂಕ:10.09.2025**

ಕನ್ನಡ ಭಾಷಾ ಸಮಗ್ರ ಅಭಿವೃದ್ಧಿ ಅಧಿನಿಯಮ, 2022 (2023 ರ ಕರ್ನಾಟಕ ಅಧಿನಿಯಮ ಸಂಖ್ಯೆ: 13) ರ ಪ್ರಕರಣ 6 ರಡಿಯಲ್ಲಿ ರಾಜ್ಯಪಾಲರಿಂದ ಅಧಿಕೃತಗೊಳಿಸಿದ the Karnataka Fire Force (Amendment) Act, 2025 (Karnataka Act 59 of 2025) ನ ಭಾಷಾಂತರವನ್ನು ಅಧಿಕೃತ ಕನ್ನಡ ಪಠ್ಯವೆಂದು ಕರ್ನಾಟಕ ರಾಜ್ಯಪತ್ರದಲ್ಲಿ (ಭಾಗ IV-A) ಪ್ರಕಟಿಸಬೇಕೆಂದು ಆದೇಶಿಸಲಾಗಿದೆ,-

**2025 ರ ಕರ್ನಾಟಕ ಅಧಿನಿಯಮ ಸಂಖ್ಯೆ: 59**

(2025 ರ ಸೆಪ್ಟೆಂಬರ್ ತಿಂಗಳ 10ನೇ ದಿನಾಂಕದಂದು ಕರ್ನಾಟಕ ರಾಜ್ಯ ಪತ್ರದ ವಿಶೇಷ ಸಂಚಿಕೆಯಲ್ಲಿ ಮೊದಲು ಪ್ರಕಟವಾಗಿದೆ)

**ಕರ್ನಾಟಕ ಅಗ್ನಿಶಾಮಕ ದಳ (ತಿದ್ದುಪಡಿ) ಅಧಿನಿಯಮ, 2025**

(2025 ರ ಸೆಪ್ಟೆಂಬರ್ ತಿಂಗಳ10ನೇ ದಿನಾಂಕದಂದು ರಾಜ್ಯಪಾಲರಿಂದ ಅನುಮೋದನೆಯನ್ನು ಪಡೆಯಲಾಗಿದೆ)

ಕರ್ನಾಟಕ ಅಗ್ನಿಶಾಮಕ ದಳ ಅಧಿನಿಯಮ, 1964ನ್ನು ಮತ್ತಷ್ಟು ತಿದ್ದುಪಡಿ ಮಾಡಲು ಒಂದು ಅಧಿನಿಯಮ.

ಇಲ್ಲಿ ಇನ್ನುಮುಂದೆ ಕಂಡುಬರುವ ಉದ್ದೇಶಗಳಿಗಾಗಿ ಕರ್ನಾಟಕ ಅಗ್ನಿಶಾಮಕ ದಳ ಅಧಿನಿಯಮ, 1964ನ್ನು (1964ರ ಕರ್ನಾಟಕ ಅಧಿನಿಯಮ 42), ಮತ್ತಷ್ಟು ತಿದ್ದುಪಡಿ ಮಾಡುವುದು ಯುಕ್ತವಾಗಿರುವುದರಿಂದ;

ಇದು ಭಾರತ ಗಣರಾಜ್ಯದ ಎಪ್ಪತ್ತಾರನೇ ವರ್ಷದಲ್ಲಿ ಕರ್ನಾಟಕ ರಾಜ್ಯ ವಿಧಾನ ಮಂಡಲದಿಂದ ಈ ಮುಂದಿನಂತೆ ಅಧಿನಿಯಮಿತವಾಗಲಿ:-

R.N.I. No. KARBIL/2001/47147 POSTAL REGN. No. RNP/KA/BGS/2202/2017-19
Licensed to post without prepayment WPP No. 297



**1. ಸಂಕ್ಷಿಪ್ತ ಹೆಸರು ಮತ್ತು ಪ್ರಾರಂಭ.-** (1) ಈ ಅಧಿನಿಯಮವನ್ನು ಕರ್ನಾಟಕ ಅಗ್ನಿಶಾಮಕ ದಳ (ತಿದ್ದುಪಡಿ) ಅಧಿನಿಯಮ**,** 2025 ಎಂದು ಕರೆಯತಕ್ಕದ್ದು.

(2) ಇದು ರಾಜ್ಯ ಸರ್ಕಾರವು ಅಧಿಸೂಚನೆಯ ಮೂಲಕ ಸರ್ಕಾರಿ ರಾಜ್ಯಪತ್ರದಲ್ಲಿ ಗೊತ್ತುಪಡಿಸಬಹುದಾದಂಥ ದಿನಾಂಕದಂದು ಜಾರಿಗೆ ಬರತಕ್ಕದ್ದು.

**2. ಪ್ರಕರಣ 15ರ ತಿದ್ದುಪಡಿ.-** ಕರ್ನಾಟಕ ಅಗ್ನಿಶಾಮಕ ದಳ ಅಧಿನಿಯಮ, 1964 (1964ರ ಕರ್ನಾಟಕ ಅಧಿನಿಯಮ 42)ರ**,** 15ನೇ ಪ್ರಕರಣದ, (2)ನೇ ಉಪಪ್ರಕರಣದ ತರುವಾಯ, ಈ ಮುಂದಿನ ಪರಂತುಕಗಳನ್ನು ಸೇರಿಸತಕ್ಕದ್ದು**,** ಎಂದರೆ:-

"ಪರಂತು, ಸದರಿ ಅಧಿನಿಯಮದ 13ನೇ ಪ್ರಕರಣದಲ್ಲಿ ಪರಿಭಾಷಿಸಿರುವಂತೆ ಹೊಸದಾಗಿ ನಿರ್ಮಾಣಗೊಂಡಿರುವ ಬಹುಮಹಡಿ ಕಟ್ಟಡಗಳ(ಎತ್ತರವಾದ ಕಟ್ಟಡಗಳ) ಮೇಲೆ ಸ್ವತ್ತು ತೆರಿಗೆಯ ಶೇಕಡಾ ಒಂದರಷ್ಟು ದರದಲ್ಲಿನ ಅಧಿಭಾರದ (Surcharge) ರೂಪದಲ್ಲಿ, ಕರ್ನಾಟಕ ಅಗ್ನಿಶಾಮಕ ದಳ (ತಿದ್ದುಪಡಿ) ಅಧಿನಿಯಮ, 2025ರ ಪ್ರಾರಂಭದ ದಿನಾಂಕದಿಂದ ಜಾರಿಗೆ ಬರುವಂತೆ ಬೆಂಕಿ ಉಪಕರವನ್ನು ವಿಧಿಸತಕ್ಕದ್ದು:

ಮತ್ತು ಪರಂತು ರಾಜ್ಯ ಸರ್ಕಾರ ಅಥವಾ ಕೇಂದ್ರ ಸರ್ಕಾರದ ಅಥವಾ ರಾಜ್ಯ ಸರ್ಕಾರ ಅಥವಾ ಕೇಂದ್ರ ಸರ್ಕಾರದ ಒಡೆತನದಲ್ಲಿರುವ ಯಾವುದೇ ಸಾರ್ವಜನಿಕ ಪ್ರಾಧಿಕಾರದ ನಿಯಂತ್ರಣ ಅಥವಾ ಸ್ವಾಧೀನದಡಿಯಲ್ಲಿರುವ ಯಾವುದೇ ಕಟ್ಟಡದ ಮೇಲೆ ಬೆಂಕಿ ಉಪಕರವನ್ನು ವಿಧಿಸತಕ್ಕದ್ದಲ್ಲ."

The above translation of the Karnataka Fire Force (Amendment) Act, 2025 (Karnataka Act 59 of 2025) shall be an authoritative text in Kannada language under section 6 of the Kannada Language Comprehensive Development Act, 2022 (Karnataka Act No. 13 of 2023).

**ಥಾವರ್‌ಚಂದ್ ಗೆಹ್ಲೋಟ್**
ಕರ್ನಾಟಕದ ರಾಜ್ಯಪಾಲರು

**ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,**

**ಜಿ. ಶ್ರೀಧರ್
ಸರ್ಕಾರದ ಕಾರ್ಯದರ್ಶಿ
ಸಂಸದೀಯ ವ್ಯವಹಾರಗಳು ಮತ್ತು
ಶಾಸನ ರಚನೆ ಇಲಾಖೆ.**

ಮುದ್ರಕರು ಹಾಗೂ ಪ್ರಕಾಶಕರು:– ಸಂಕಲನಾಧಿಕಾರಿಗಳು, ಕರ್ನಾಟಕ ರಾಜ್ಯಪತ್ರ, ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು

THAMMAIAH